2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ

ಸಿ.ಸಿ. 17/2024

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ01**

**ದಿನಾಂಕಃ** 24.07.2025

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಬಿ ಜಿ ವಕೀಲರಿಂದಃ**

ಘಟನಾ ಸ್ಥಳದ ಅಕ್ಕ ಪಕ್ಕ ಸಾಕಷ್ಟು ಮನೆಗಳಿವೆ ಎಂದರೆ ಸರಿ. ಘಟನಾ ಸ್ಥಳದ ದಕ್ಷಿಣ ಭಾಗಕ್ಕೆ ಶೇಖರಪ್ಪ ಶಾರದಮ್ಮ ರಂಘನಾಥ ಮತ್ತು ಬಸವರಾಜ ರವರ ಮನೆಗಳಿವೆ ಎಂದರೆ ಸರಿ. ಘಟನಾ ಸ್ಥಳದ ಪಶ್ಚಿಮ ಭಾಗಕ್ಕೆ ಬಾಬುರಾವ ಮುತ್ತ ಅವರ ಮಕ್ಕಳ ಮನೆ ಇದೆ ತದನಂತರ ಹೊನ್ನಪ್ಪನವರ ಮನೆ ಇದೆ ಎಂದರೆ ಸರಿ. ಘಟನಾ ಸ್ಥಳದ ಉತ್ತರ ಭಾಗಕ್ಕೆ ಅಮ್ಮುರಾಜರವರ ಮನೆ ಇದೆ ಎಂದರೆ ನನಗೆ ಗೊತ್ತಿಲ್ಲ. ಘಟನಾ ಸ್ಥಳದ 50 ಮೀಟರ್ ದೂರದಲ್ಲಿ ದಕ್ಷಿಣ ದಿಕ್ಕಿಗೆ ಮಲೆಬೆನ್ನೂರು ಗುಡದಳ್ಳಿ ರಸ್ತೆ ಇದೆ ಎಂದರೆ ಸರಿ. ಸದರಿ ರಸ್ತೆಯಲ್ಲಿ ಸಾಕಷ್ಟು ಜನ ಓಡಾಡುತ್ತಿರುತ್ತಾರೆ ಎಂದರ ನನಗೆ ಗೂತ್ತಿಲ್ಲ. ಘಟನಾ ಸ್ಥಳದ 15-20 ಅಡಿ ದೂರದ ಚಾನಲ್ ಪಕ್ಕ ರಸ್ತೆ ಇದೆ ಎಂದರೆ ಎಸರಿ. ಸದರಿ ರಸ್ತೆಯ ಸಾಕಷ್ಟು ಜನ ಓಡಾಡುತ್ತಿರುತ್ತಾರೆ ಎಂದರ ನನಗೆ ಗೂತ್ತಿಲ್ಲ. ಸದರಿ ಎರಡು ರಸ್ತೆಗಳಲ್ಲಿ ಸಾಕಷ್ಟು ಜನ ಓಡಾಡುತ್ತಿದ್ದರೂ ಸಹ ಗೊತ್ತಿಲ್ಲ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಗಲಾಟೆಯಾದ ದಿನ ದೂರು ನೀಡಲು ನಿಮಗೆ ತೊಂದರೆ ಇರಲಿಲ್ಲ ಎಂದರೆ ಸಾಕ್ಷಿಯು ನಾನು ದೂರು ನೀಡಲು ಹೋಗಿದ್ದೆ ಆಗ ಪೊಲೀಸರು ಒಂದು ಸಾರಿ ಮಾತನಾಡಿ ನೋಡಿ ಎಂದು ದೂರನ್ನು ತೆಗೆದುಕೊಂಡಿರುವುದಿಲ್ಲ ಎಂದು ನುಡಿಯುತ್ತಾರೆ. ಈ ರೀತಿ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಆಸ್ಪತ್ರೆಗೆ ಚಿಕಿತ್ಸೆ ಪಡೆದ ಬಗ್ಗೆ ಮಲೆಬೆನ್ನೂರು ಸರ್ಕಾರಿ ಆಸ್ಪತ್ರೆಯ ನೊಂದಣಿ ಪುಸ್ತಕದಲ್ಲಿ ಬರೆದಿರುತ್ತಾರೆ ಸದರಿ ದಾಖಲೆಯನ್ನು ಪೊಲೀಸರಿಗೆ ನೀಡುವುದಾಗಿ ತಿಳಿಸಿರುತ್ತಾರೆ ಎಂದು ನುಡಿಯುತ್ತಾರೆ. ಸಾಮಾನ್ಯವಾಗಿ ಆಸ್ಪತ್ರೆಗೆ ಹೋದಾಗ ರೋಗಿಗಳು ಮೊದಲು ಕಾರ್ಡನ್ನು ಪಡೆಯಬೇಕು ಎಂದರೆ ನನಗೆ ಗೊತ್ತಿಲ್ಲ. ನಾನು ಆಸ್ಪತ್ರೆಗೆ ಹೋಗಿಲ್ಲ ಹಾಗೂ ಚಿಕಿತ್ಸೆ ಪಡೆದಿಲ್ಲ ಎಂದರೆ ಸರಿಯಲ್ಲ. ಆರೋಪಿತರು ನನ್ನ ಬಟ್ಟೆಯನ್ನು ಹರಿದು ಹಾಕಿದಾಗ ನನಗೆ ರಕ್ತ ಬಂದಿತ್ತು. ನನ್ನ ಬಟ್ಟೆ ಮೇಲೆ ರಕ್ತದ ಕಲೆಗಳು ಆಗಿದ್ದವು. ರಕ್ತದ ಕಲೆಗಳು ಆದ ಬಟ್ಟೆಗಳನ್ನು ಪೊಲೀಸರಿಗೆ ನೀಡಿದ್ದೇವೆ.

1 ನೇ ಆರೋಪಿ ಮನೆ ಘಟನಾ ಸ್ಥಳದಿಂದ 500-600 ಅಡಿ ದೂರ ಇದೆ ಎಂದರೆ ಸಾಕ್ಷಿಯು 3-4 ಮನೆ ಅಂತರದಲ್ಲಿ ಇದೆ ಎಂದು ನುಡಿಯುತ್ತಾರೆ. 3 ನೇ ಆರೋಪಿ ನೆಹರು ನಗರದ ವಾಸಿ ಎಂದರೆ ಸಾಕ್ಷಿಯು ಘಟನೆ ನಡೆದ ಸ್ಥಳದಲ್ಲಿ ಇದ್ದರು ಎಂದು ನುಡಿಯುತ್ತಾರೆ. ಈ ರೀತಿ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. 1 ನೇ ಆರೋಪಿ ನನ್ನ ಹೆಂಡತಿಗೆ ಚಿಕ್ಕಪ್ಪ ಎಂದರೆ ಸರಿ. 3 ನೇ ಆರೋಪಿ ನನ್ನ ಹೆಂಡತಿಯ ದೊಡ್ಡಪ್ಪ ಎಂದರೆ ಸರಿ. ಮದುವೆಯಾದ ನಂತರ ನಮಗೆ ಶೃತಿ ಎಂಬ ಮಗಳಿದ್ದು ಅವರ ಆರೋಗ್ಯ ಸರಿ ಇರಲಿಲ್ಲ ಎಂದರೆ ಸರಿ. ನನ್ನ ಮಗಳಿಗೆ ಚಿಕಿತ್ಸೆ ಕೊಡಿಸಬೇಕಾಗಿದ್ದರೂ ನಾನು ಅವರ ಕಡೆ ಗಮನ ಕೊಟ್ಟಿಲ್ಲ ಹಾಗೂ ಚಿಕಿತ್ಸೆ ಕೊಡಿಸಿಲ್ಲ ಎಂದರೆ ಸರಿಯಲ್ಲ. ಈ ವಿಚಾರವಾಗಿ

ನನ್ನ ಮಾವಂದಿರು ಅಂದರೆ ಆರೋಪಿತರು ನನಗೆ ಬುದ್ದಿಮಾತು ಹೇಳುತ್ತಿದ್ದರು ಎಂದರೆ ಸರಿಯಲ್ಲ. ಈ ರೀತಿ ಬುದ್ದಿವಾದ ಹೇಳಿದ್ದರೂ ಸಹ ನಾನು ಹೆಂಡತಿ ಮಕ್ಕಳನ್ನು ಸರಿಯಾಗಿ ನೋಡಿಕೊಳ್ಳದೇ ಕುಡಿದು ಬಂದು ಅವರಿಗೆ ಕಿರುಕುಳ ನೀಡಿತ್ತಿದ್ದೆ ಎಂದರೆ ಸರಿಯಲ್ಲ. ಇದರಿಂದಾಗಿ ಬೇಸತ್ತು ನನ್ನ ಹೆಂಡತಿ ಅವರ ತವರು ಮನೆಗೆ ಹೋಗಿರುತ್ತಾಳೆ ಎಂದರೆ ಸರಿಯಲ್ಲ. ಆರೋಪಿತರೇ ನನ್ನ ಮಗಳಿಗೆ ಚಿಕಿತ್ಸೆ ಕೊಡಿಸುತ್ತಿದ್ದರು ಎಂದರೆ ಸರಿಯಲ್ಲ. ನೀವು ನಿಮ್ಮ ಹೆಂಡತಿ ಮಗಳನ್ನು ನಿರ್ಲಕ್ಷ್ಯ ಮಾಡಿದ್ದರಿಂದ ನಿಮ್ಮ ಹೆಂಡತಿ ನಿಮ್ಮ ವಿರುದ್ಧ ವಿಚ್ಛೇದನ ಕೋರಿ ಅರ್ಜಿ ಸಲ್ಲಿಸಿದ್ದಾರೆ ಎಂದರೆ ಸಾಕ್ಷಿಯು ನಾನು ನಿರ್ಲಕ್ಷ್ಯ ಮಾಡಿಲ್ಲ ಎಂದು ನುಡಿಯುತ್ತಾರೆ. ನನ್ನ ಹೆಂಡತಿ ನನ್ನಿಂದ ವಿಚ್ಛೇದನ ಪಡೆಯಲು ನನಗೆ ಒತ್ತಾಯ ಮಾಡುತ್ತಿದ್ದರು ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಈ ರೀತಿ ಒತ್ತಾಯ ಮಾಡಿದ ಬಗ್ಗೆ ದೂರು ನೀಡಿರುತ್ತಿರಾ ಎಂದರೆ ಸಾಕ್ಷಿಯು ನೀಡಿರುತ್ತೇನೆ ಎಂದು ನುಡಿಯುತ್ತಾರೆ. ಈ ಬಗ್ಗೆ ದಾಖಲೆಗಳನ್ನು ನ್ಯಾಯಾಲಯಕ್ಕೆ ಸಲ್ಲಿಸಿಲ್ಲ. ಆರೋಪಿತರು ನನ್ನ ಮೇಲೆ ಹಲ್ಲೆ ಮಾಡಿದ್ದಾರೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿತರು ಯಾವುದೇ ಅವಾಚ್ಯ ಶಬ್ದಗಳಿಂದ ನನಗೆ ಬೈದಿರುವುದಿಲ್ಲ ಎಂದರೆ ಸರಿಯಲ್ಲ. ಆರೋಪಿತರು ನನಗೆ ಜೀವ ಬೆದರಿಕೆ ಹಾಕಿರುವುದಿಲ್ಲ ಎಂದರೆ ಸರಿಯಲ್ಲ.1 ನೇ ಆರೋಪಿ ಒಂದು ದೊಡ್ಡ ಗಾತ್ರದ ಕಲ್ಲನ್ನು ತೆಗೆದುಕೊಂಡು ಬಂದು ನನ್ನ ತಲೆ ಮೇಲೆ ಹಾಕಲು ಪ್ರಯತ್ನಿಸಿದ್ದರು ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಬಟ್ಟೆಯನ್ನು ಹರಿದು ಹಾಕಿದ್ದರು ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿದ್ದೇನೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಯಾವುದೇ ಘಟನೆ ನಡೆಯದಿದ್ದರೂ ಸಹ ಪೊಲೀಸರ ಮೇಲೆ ಪ್ರಭಾವ ಬೀರಿ ಆರೋಪಿತರ ವಿರುದ್ಧ ಸುಳ್ಳು ದೂರು ದಾಖಲಿಸಿದ್ದೇನೆ ಎಂದರೆ ಸರಿಯಲ್ಲ. ಅದೇ ರೀತಿ ನನ್ನ ಹೆಂಡತಿ ಸಹ ನನ್ನ ಮೇಲೆ ದೂರು ದಾಖಲಿಸಿದ್ದಾರೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಯಾವುದೇ ಪಂಚನಾಮೆ ಜರುಗಿಸಿಲ್ಲ, ಕಚ್ಚಾ ನಕಾಶೆ ತೆಗೆದಿಲ್ಲ ಛಾಯ ಚಿತ್ರ ತೆಗೆದಿಲ್ಲ ಎಂದರೆ ಸರಿಯಲ್ಲ. ಆರೋಪಿತರು ನನಗೆ ಯಾವುದೇ ರೀತಿಯ ತೊಂದರೆ ಕೊಟ್ಟಿಲ್ಲದಿದ್ದರೂ ಸಹ ಸುಳ್ಳು ಪ್ರಕರಣ ದಾಖಲಿಸಿದ್ದೇನೆ ಎಂದರೆ ಸರಿಯಲ್ಲ.

ದಿಃ 21.09.2024 ರಂದು ಬಾಪೂಜಿ ಸಮುದಾಯ ಭವನ ರಸ್ತೆಯಲ್ಲಿ 2 ನೇ ಆರೋಪಿ ಮತ್ತು ಅವರು ಸಂಬಂಧಿಕರು ಹೋಗುತ್ತಿದ್ದ ಕಾರನ್ನು ಶಾಮನೂರು ತಿರುಮಲ ಬಾರ್ ಹತ್ತಿರ ಅಡ್ಡಗಟ್ಟಿ ಅವಾಚ್ಯ ಶಬ್ದಗಳಿಂದ ಬೈದು ಕಾರಿನಿಂದ ಇಳಿದು 2 ನೇ ಆರೋಪಿ ಅಳಿಯನ ಹಲ್ಲೆ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಈ ವಿಚಾರವಾಗಿ ಸದರಿಯವರು ನನ್ನ ವಿರುದ್ಧ ದೂರು ಸಲ್ಲಿಸಿದ್ದಾರೆ ಎಂದರೆ ಸರಿಯಲ್ಲ. ಸಾಕ್ಷಿಯು ನಾನೇ ದೂರು ಸಲ್ಲಿಸಿದ್ದೇನೆ ಎಂದು ನುಡಿಯುತ್ತಾರೆ. ಈ ವಿಚಾರವಾಗಿ ಪೊಲೀಸರು ನ್ಯಾಯಾಲಯದಲ್ಲಿ ವಿಚಾರ ಬಗೆಹರಿಸಿಕೊಳ್ಳಿ ಎಂದು ಹಿಂಬರಹ ನೀಡಿರುತ್ತಾರೆ ಎಂದರೆ ಸಾಕ್ಷಿಯು ಗಂಡ ಹೆಂಡತಿ ಜಗಳವನ್ನು ಮುಗಿಸಿಕೊಳ್ಳಿ ಎಂದು ಹೇಳಿರುತ್ತಾರೆ. ನನ್ನ ಮುಖ್ಯ ವಿಚಾರಣೆಯ ಮೊದಲನೆ ಪ್ಯಾರಾದ ಅಂಶಗಳನ್ನು ನಿಪಿ.1 ದೂರಿನಲ್ಲಿ ಹೇಳಿಲ್ಲ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

sd/

2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು

ಮತ್ತು ಜೆಎಂಎಫ್‌ಸಿ, ಹರಿಹರ